667 (810) ಶ್ರೀ ಅಂಗಾರ ಎಸ್. (ಸೂಳ್ಯ) : ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗೆ ಉತ್ತರಿಸುವರೇ?

ಅ) ಸೂಳ್ಯ ವಿಧಾನ ಸಭೆ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ಜನರ ಸಂಪರ್ಕಕ್ಕೆ ಇರುವ ರಸ್ತೆಗಳನ್ನು ಮುಚ್ಚುವ ಉದ್ದೇಶ ಸರ್ಕಾರಕ್ಕೆ ಇದೆಯೇ:

ಆ) ಹಾಗಿದ್ದಲ್ಲಿ, ಸಂಪರ್ಕಕ್ಕಾಗಿ ಬದಲಿ ವ್ಯವಸ್ಥೆ ಮಾಡಿಕೊಡಲಾಗುವುದೇ (ವಿವರ ನೀಡುವುದು)?

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

668 (811) ಶ್ರೀ ಅಂಗಾರ ಎಸ್. (ಸೂಳ್ಯ) : ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸೂಳ್ಯ ವಿಧಾನ ಸಭಾ ಕ್ಷೇತ್ರದ ಯಾವ ಯಾವ ಗ್ರಾಮಗಳಲ್ಲಿ ಎಷ್ಟೆಷ್ಟು ಕುಟುಂಬಗಳು ಒತ್ತುವರಿ ಮಾಡಿ ಕೃತವಳಿಯನ್ನು ಮಾಡುತ್ತಿದ್ದಾರೆ (ಗ್ರಾಮ, ಕುಟುಂಬವಾರು ವಿವರ ನೀಡುವುದು):

ಆ) ಸದರಿ ಕಟುಂಬಗಳು ಒತ್ತುವರಿ ಮಾಡಿದ ಕೃತವಳಿಯನ್ನು ಸಕ್ರಮಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ ಕೈಗೊಂಡ ಕ್ರಮಗಳೇನು ವಿವರ ನೀಡುವುದು?

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ಸೂಳ್ಯ ವಿಧಾನ ಸಭಾ ಕ್ಷೇತ್ರದ 38 ಗ್ರಾಮಗಳಲ್ಲಿ ಒಟ್ಟು 1034 ಕುಟುಂಬಗಳು ಅರಣ್ಯ ಪ್ರದೇಶ ಒತ್ತುವರಿ ಮಾಡಿ ಕೃತವಳಿಗಳನ್ನು ಮಾಡುತ್ತಿದ್ದಾರೆ. ಈ ಎಲ್ಲಾ ಒತ್ತುವರಿಗಳು ದಿನಾಂಕ: 27-4-1978 ರ ನಂತರದ ಒತ್ತುವರಿಯಾಗಿರುತ್ತದೆ. (ಗ್ರಾಮವಾರು ವಿವರಗಳ ಪಟ್ಟಿಯನ್ನು ಲಗತ್ತಿಸಿದೆ).

ಆ) ಈ ಒತ್ತುವರಿಯನ್ನು ಸಕ್ರಮಗೊಳಿಸಬೇಕಾದಲ್ಲಿ ಅರಣ್ಯ (ಸಂರಕ್ಷಣಾ) ಕಾಯ್ದೆ 1980 ರಡಿಯಲ್ಲಿ ಕೇಂದ್ರ ಸರ್ಕಾರದ ಪೂರ್ವಾನುಮೋದನೆ ಬೇಕಾಗಿರುತ್ತದೆ. ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಹಾಗೂ ಕೇಂದ್ರ ಸರ್ಕಾರದ ನಿರ್ದೇಶನದನ್ವಯ 1980 ರ ನಂತರದ ಒತ್ತುವರಿಗಳನ್ನು ತೆರವುಗೊಳಿಸಬೇಕಾಗಿದೆ. ದಿನಾಂಕ: 24-10-1980ರ ಪೂರ್ವದ ಅರಣ್ಯ ಭೂಮಿಯಲ್ಲಿನ ಅತಿಕ್ರಮಣಗಳನ್ನು ಸಕ್ರಮಗೊಳಿಸುವ ಬಗ್ಗೆ 'ಪರಿಶೀಲಿಸಲು ತಾಲ್ಲೂಕು ಮಟ್ಟದ ಸಮಿತಿಗಳನ್ನು ರಚಿಸಲಾಗಿದೆ. ದಿನಾಂಕ: 24-10-1980 ರ ನಂತರ ಅರಣ್ಯ ಒತ್ತುವರಿಯಾಗಿರುವ ಅರ್ಹ ಪ್ರಕರಣಗಳನ್ನು ಸಕ್ರಮಗೊಳಿಸಲು ಅರಣ್ಯ (ಸಂರಕ್ಷಣಾ) ಕಾಯ್ದೆ 1980 ರ ಮಾರ್ಗ ಸೂಚಿಗಳನ್ನು ಸಡಿಲಿಸುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗಿತ್ತು. ಕೇಂದ್ರ ಸರ್ಕಾರವು ಪ್ರಸ್ತಾವನೆಯನ್ನು ತಿರಸ್ಕರಿಸಿದೆ. ಆದರೆ ದಿನಾಂಕ: 24-10-1980 ರ ನಂತರ ಆದ ಅರ್ಹ ಒತ್ತುವರಿಗಳನ್ನು ಸಕ್ರಮಗೊಳಿಸಲು ಮಾರ್ಗ ಸೂಚಿಗಳನ್ನು ಸಡಿಲಿಸುವಂತೆ ಪುನಃ ಕೇಂದ್ರ ಸರ್ಕಾರವನ್ನು ಕೋರಿದೆ

| ಕ್ರಮ ಸಂಖ್ಯೆ | ಗ್ರಾಮ | ಒತ್ತುವರಿ ಮಾಡಿರುವ ಕುಟುಂಬಗಳ ಸಂಖ್ಯೆ |
|---|---|---|
| 1 | ಕೀನ್ಯ | 1 |
| 2 | ಬಳ್ಪ | 3 |
| 3 | ಕಲ್ಲಡ್ಕ | 1 |
| 4 | ಸುಳ್ಯ | 9 |